**ಸಾಕ್ಷಿಗೆ ದಿನಾಂಕಃ 26.03.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.ASSR ರವರಿಂದಃ**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು**,** **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು**,** ಅಂತಿಮ ವರದಿಯನ್ನು ನಿ.ಪಿ.**3** ಎಂದು**,** ಕೃತ್ಯ ನಡೆದ ಸ್ಥಳದ ನಕ್ಷೆಯನ್ನು ನಿ.ಪಿ.**4** ಎಂದು**,** **ಸ್ಥಳ ಪಂಚನಾಮೆಯನ್ನು** ನಿ.ಪಿ.**5** ಎಂದು**,** ಮತ್ತು ಐಎಂವಿ ವರದಿಯನ್ನು ನಿ.ಪಿ.**6** ಎಂದು**,** ಮತ್ತು ಗಾಯದ ಪ್ರಮಾಣ ಪತ್ರವನ್ನು ನಿ.ಪಿ.**7** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.1 ರಿಂದ ನಿ.ಪಿ.7 ಎಂದು ಗುರುತು ಆಗಿರುವ ದಾಖಲೆಗಳು ಚನ್ನಗಿರಿ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

3) ಒಂದು ಹೊರರೋಗಿ ವಿಭಾಗದ ಚೀಟಿಯನ್ನು ಹಾಜರುಪಡಿಸಿದ್ದು ಅದನ್ನು **ನಿ.ಪಿ.8** ಎಂದು ಗುರುತಿಸಿದೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.